# Akashvani : Bangalore

**13.08.2024** **18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ತುಂಗಭದ್ರಾ ಜಲಾಶಯ ದುರಸ್ಥಿ ಕಾರ್ಯ ಶೀಘ್ರವೇ ಪೂರ್ಣ; ರೈತರ ಹಿತ ಕಾಪಾಡಲು ಬದ್ಧ- ಮುಖ್ಯಮಂತ್ರಿ ಸಿದ್ದರಾಮಯ್ಯ

೨. ದೇಶಾಭಿಮಾನ ಮೂಡಿಸಲು ಇದೇ ೧೫ರವರೆಗೆ 'ಹರ್ ಘರ್ ತಿರಂಗಾ' ಅಭಿಯಾನ; ವಿವಿಧ ಜಿಲ್ಲೆಗಳಲ್ಲಿ ವಿಶೇಷ ಕಾರ್ಯಕ್ರಮ ಆಯೋಜನೆ

೩. ಕಲಬುರಗಿಯ ಜಯದೇವ ಹೃದ್ರೋಗ ಆಸ್ಪತ್ರೆ ಕಾಮಗಾರಿ ಬಹುತೇಕ ಪೂರ್ಣ; ಸೆಪ್ಟೆಂಬರ್‌ನಲ್ಲಿ ಲೋಕಾರ್ಪಣೆ- ಸಚಿವ ಡಾ. ಶರಣಪ್ರಕಾಶ ಪಾಟೀಲ

೪. ೨೦೩೫ರ ವೇಳೆಗೆ ಭಾರತೀಯ ಅಂತರಿಕ್ಷಾ ಕೇಂದ್ರ ಸ್ಥಾಪಿಸಲು ಇಸ್ರೋ ಯೋಜನೆ

**<><*<><>*><>**

ವಿಜಯನಗರ ಜಿಲ್ಲೆಯ ತುಂಗಭದ್ರಾ ಜಲಾಶಯದ ಗೇಟ್ ೧೯ರ ಸರಪಳಿ ಕಳಚಿ ಮುರಿದಿರುವ ಹಿನ್ನೆಲೆಯಲ್ಲಿ ಜಲಾಶಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ದುರಸ್ತಿಯ ಜೊತೆಗೆ ಕಲ್ಯಾಣ ಕರ್ನಾಟಕ ಭಾಗದ ಎಲ್ಲ ರೈತರ ಹಿತ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು. ಪ್ರಸಕ್ತವಾಗಿ ಜಲಾಶಯದಲ್ಲಿ ೫೦ ರಿಂದ ೬೦ ಕ್ಯೂಸೆಕ್ ನೀರು ಉಳಿಯುತ್ತದೆ. ಉಳಿಯುವ ನೀರಿನಿಂದ ಗೇಟ್‌ನ ದುರಸ್ತಿಗಾಗಿ ಇಂದಿನಿಂದ ೫೦ ರಿಂದ ೬೦ ದಿವಸಕ್ಕೆ ನೀರನ್ನು ಹೊರ ಬಿಡಲಾಗುವುದು ಆದರೆ ಹವಾಮಾನ ಮುನ್ಸೂಚನೆಯಂತೆ ಮುಂದಿನ ದಿನಗಳಲ್ಲಿ ಮತ್ತೆ ಮಳೆಯಾಗಿ ಡ್ಯಾಮ್ ತುಂಬುವ ಭರವಸೆ ಇದೆ. ಈಗಿರುವ ನೀರಿನಿಂದ ರೈತರ ಒಂದು ಬೆಳೆಗೆ ಅನುಕೂಲವಾಗಲಿದೆ. ನಂತರ ಮತ್ತೆ ಜಲಾಶಯ ಭರ್ತಿಯಾದ ನಂತರ ಎರಡನೇ ಗುಳಿಗೆ ಸಹ ನೀರು ದೊರೆಯಲಿದೆ ಎಂದರು. ಕರ್ನಾಟಕ ಆಂಧ್ರಪ್ರದೇಶ ಮತ್ತು ತೆಲಂಗಾಣ ಸರ್ಕಾರದ ಪ್ರತಿನಿಧಿಗಳು ತುಂಗಭದ್ರಾ ಬೋರ್ಡ್‌ನ ಸಹಕಾರದೊಂದಿಗೆ ಕನ್ನಯ್ಯ ನಾಯ್ಡು ಅವರು ತಾಂತ್ರಿಕ ತಜ್ಞರಾಗಿದ್ದು, ಅವರ ಸಲಹೆಯಂತೆ ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗಿದೆ. ಈಗಾಗಲೇ ಗೇಟ್‌ನ ನಿರ್ಮಾಣ ಕಾರ್ಯ ನಡೆಯುತ್ತಿದ್ದು, ಇನ್ನು ಮೂರು ನಾಲ್ಕು ದಿನಗಳೊಳಗೆ ದುರಸ್ಥಿ ಕಾರ್ಯ ಪೂರ್ಣಗೊಳ್ಳಲಿದೆ ಎಂದರು.

<><*<><>*><>

೭೬ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಸಂಭ್ರಮದಲ್ಲಿ ದೇಶಾಭಿಮಾನದ ಜಾಗೃತಿ ಮೂಡಿಸಲು ಆಗಸ್ಟ್ ೧೫ರವರೆಗೆ 'ಹರ್ ಘರ್ ತಿರಂಗಾ' ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ತಮ್ಮ ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸಿ ಏಕತೆಯನ್ನು ಮೆರೆಯಬೇಕಿದೆ. ಇದರ ಅಂಗವಾಗಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನಲ್ಲಿಂದು ಸ್ವಾತಂತ್ರ್ಯ ಹೋರಾಟದ ಕುರಿತು ಜನಜಾಗೃತಿಗಾಗಿ ಪ್ರತಿಯೊಂದು ಮನೆಯ ಮೇಲೆ ಭಾರತದ ತ್ರಿವರ್ಣ ಧ್ವಜ ಹಾರಿಸುವ 'ಹರ್ ಘರ್ ತಿರಂಗ' ಅಭಿಯಾನಕ್ಕೆ ಚಾಲನೆ ನೀಡಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಾತಂತ್ರ್ಯ ದಿನಾಚರಣೆಯ ಶುಭ ಸಂದರ್ಭದಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಸ್ವಾತಂತ್ರ್ಯ ದಿನವನ್ನು ಅರ್ಥಪೂರ್ಣವಾಗಿ ಆಚರಿಸಬೇಕು; ಯುವ ಪೀಳಿಗೆಗೆ ಸ್ವಾತಂತ್ರ್ಯ ಸಂಗ್ರಾಮದ ದಿನಗಳನ್ನು ನೆನಪಿಸಿ ಕೊಡಬೇಕು. ಅದಕ್ಕಾಗಿ ಯುವಜನತೆಯಲ್ಲೂ ದೇಶಭಕ್ತಿ ಜಾಗೃತಿಗಾಗಿ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು. ತುಮಕೂರು ಜಿಲ್ಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸೂಚನೆಯಂತೆ ಭಾರತ ಸ್ವಾತಂತ್ರ್ಯ ಅಮೃತ ಮಹೋತ್ಸವದ ಹಿನ್ನಲೆಯಲ್ಲಿ ಜಿಲ್ಲಾದ್ಯಂತ 'ಹರ್ ಘರ್ ತಿರಂಗಾ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಅಭಿಯಾನದಲ್ಲಿ ವಿವಿಧ ವೈವಿಧ್ಯಮಯ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದು ತುಮಕೂರು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ. ಹುಬ್ಬಳ್ಳಿಯ ವಿದ್ಯಾನಗರದ ಮಹಿಳಾ ವಿದ್ಯಾಪೀಠದಲ್ಲಿ ಜಿಲ್ಲಾಡಳಿತ, ಹುಬ್ಬಳ್ಳಿ ತಾಲೂಕು ಆಡಳಿತ, ಶಾಲಾ ಶಿಕ್ಷಣ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವುಗಳ ಸಂಯುಕ್ತಾಶ್ರಯದಲ್ಲಿ ೭೬ನೇ ಸ್ವಾತಂತ್ರೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಪಾರಂಪರಿಕ ನಡಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಚಿತ್ರದುರ್ಗ ಜಿಲ್ಲೆಯಲ್ಲಿ ೭೬ಸ್ವಾತಂತ್ರ್ಯ ದಿನದ ಅಂಗವಾಗಿ ಆಯೋಜಿಸಲಾದ ಹರ್ ಘರ್ ತಿರಂಗಾ ಅಭಿಯಾನವನ್ನು ಸಂಸದ ಗೋವಿಂದ ಕಾರಜೋಳ ಕರೆ ಉದ್ಘಾಟಿಸಿ ಅವರು ಮಾತನಾಡಿದರು. ನಗರದ ಒಬವ್ವ ವೃತ್ತದಿಂದ ೩೫೦ಮೀಟರ್ ಉದ್ದದ ರಾಷ್ಟಧ್ವಜದ ಅಭಿಯಾನಕ್ಕೆ ಸಂಸದರು ಚಾಲನೆ ನೀಡಿದರು. ಉತ್ತರ ಕನ್ನಡ ಜಿಲ್ಲೆಯಲ್ಲಿ ೭೬ನೇ ಸ್ವಾತಂತ್ರ್ಯೋತ್ಸವ ಅಂಗವಾಗಿ 'ಹರ್ ಘರ್ ತಿರಂಗಾ' ಅಭಿಯಾನ ಜರುಗಿತು. ಅಭಿಯಾನದ ಅಂಗವಾಗಿ ಸೈಕ್ಲೋಥಾನ್‌ಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಚಾಲನೆ ನೀಡಿ, ದೇಶಾಭಿಮಾನದ ಜಾಗೃತಿಗಾಗಿ ಇಂದಿನಿಂದ ಆಗಸ್ಟ್ ೧೫ರವರೆಗೆ 'ಹರ್ ಘರ್ ತಿರಂಗಾ' ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ತಮ್ಮ ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸಿ ಏಕತೆಯನ್ನು ಮೆರೆಯಬೇಕು ಎಂದರು. ಚಿಕ್ಕಮಗಳೂರು ಜಿಲ್ಲೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ 'ಹರ್ ಘರ್ ತಿರಂಗಾ' ಅಭಿಯಾನದಡಿ

ಪ್ರತಿ ಮನೆಯಲ್ಲೂ ರಾಷ್ಟ್ರ ಧ್ವಜ ಹಾರಿಸುವಂತೆ ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದ್ದಾರೆ.

**<><*<><>*><>**

ಆಗಸ್ಟ್ ೧೫ ರಂದು ನಡೆಯಲಿರುವ ಸ್ವಾತಂತ್ರ್ಯೋತ್ಸವ ಸಮಾರಂಭಕ್ಕೆ ಭಾರಿ ಬಿಗಿ ಪೊಲೀಸ್ ಭದ್ರತೆ ವಹಿಸಲಾಗಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದರು. ಈ ಕುರಿತು ಮಾತನಾಡಿ ಮಾಹಿತಿ ನೀಡಿದ ಪೊಲೀಸ್ ಆಯುಕ್ತ ಬಿ.ದಯಾನಂದ್, ಆಗಸ್ಟ್ ೧೫ ರಂದು ಮಾಣೆಕ್ ಷಾ ಪರೇಡ್ ಗ್ರೌಂಡ್‌ನಲ್ಲಿ ನಡೆಯಲಿರುವ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮಕ್ಕೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ರಿಹರ್ಸಲ್ ಕಾರ್ಯಕ್ರಮ ಮಾಡಲಾಗಿದೆ. ಕಾರ್ಯಕ್ರಮ ಹಿನ್ನೆಲೆ ೧೫ ದಿನಗಳಿಂದ ಕಟ್ಟೆಚ್ಚರವಹಿಸಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮಕ್ಕೆ ಬಿಗಿ ಭದ್ರತೆಗಾಗಿ ೧೦ ಡಿಸಿಪಿ, ೧೭ ಎಸಿಪಿ, ೪೨ ಇನ್ಸ್‌ಪೆಕ್ಟರ್, ೧೧೨ ಪಿಎಸ್‌ಐ, ೬೨ ಎಎಸ್‌ಐ, ೫೧೧ ಕಾನ್ಸ್‌ಟೇಬಲ್‌ಗಳು, ೬೨ ಮಹಿಳಾ ಸಿಬ್ಬಂದಿ ನೇಮಕ ಮಾಡಲಾಗಿದೆ. ೧೨೯ ಮಂದಿ ಮಫ್ತಿಯಲ್ಲಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಹೇಳಿದರು. ಸಿಸಿಟಿವಿ ಪರಿಶೀಲನೆ ಮಾಡುವುದಕ್ಕೆಂದೇ ೨೭ ಸಿಬ್ಬಂದಿ ನೇಮಕ ಮಾಡಲಾಗಿದೆ. ಹೆಚ್ಚುವರಿಯಾಗಿ ಹತ್ತು ಕೆಎಸ್‌ಆರ್‌ಪಿ ತುಕಡಿ ನಿಯೋಜನೆ ಮಾಡಲಾಗಿದೆ. ಸಂಚಾರ ನಿರ್ವಹಣೆ ವಿಚಾರವಾಗಿಯೂ ಪೊಲೀಸ್ ಅಧಿಕಾರಿಗಳ ನೇಮಕ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ಬೆಳಗಾವಿಯ ವಿಟಿಯು ಮತ್ತು ಧಾರವಾಡದ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದಿಂದ ಇಸ್ರೋ ಅಧ್ಯಕ್ಷರಾದ ಎಸ್.ಸೋಮನಾಥ್ ಅವರಿಗೆ ನೀಡಲಾಗಿರುವ ಗೌರವ ಡಾಕ್ಟರೇಟ್ ಅನ್ನು ರಾಜಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಪ್ರದಾನ ಮಾಡಿದರು. ನಂತರ ಮಾತನಾಡಿದ ಅವರು, ಇಸ್ರೋ ಅಧ್ಯಕ್ಷರಾದ ಎಸ್. ಸೋಮನಾಥ್ ಅವರ ನಾಯಕತ್ವ ಮತ್ತು ದೃಷ್ಟಿ ಭಾರತದ ಬಾಹ್ಯಾಕಾಶ ಪರಿಶೋಧನಾ ಕಾರ್ಯಕ್ರಮಗಳನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸಹಾಯ ಮಾಡುತ್ತಿದೆ ಎಂದು ಅಭಿಪ್ರಾಯಪಟ್ಟರು.

**<><*<><>*><>**

ಕಲಬುರಗಿಯಲ್ಲಿ ಸುಮಾರು ೧೯೨ ಕೋಟಿ ರೂಪಾಯಿ ಅನುದಾನದಡಿ ನಿರ್ಮಿಸಲಾಗುತ್ತಿರುವ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಆಸ್ಪತ್ರೆಯ ಶೇಕಡ ೯೦ರಷ್ಟು ಕಾಮಗಾರಿ ಮುಗಿದಿದ್ದು, ಸೆಪ್ಟೆಂಬರ್ ಮಾಹೆಯಲ್ಲಿ ಇದರ ಲೋಕಾರ್ಪಣೆ ಮಾಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು. ಇಂದು ನಿರ್ಮಾಣದ ಹಂತದಲ್ಲಿರುವ ಜಯದೇವ ಹೃದ್ರೋಗ ಆಸ್ಪತ್ರೆಗೆ ಭೇಟಿ ನೀಡಿ ಕಾಮಗಾರಿ

ಪರಿಶೀಲಿಸಿದ ಅವರು, ೩೭೧ ಹಾಸಿಗೆ ಸಾಮರ್ಥ್ಯದ ಈ ಆಸ್ಪತ್ರೆ ಲೋಕಾರ್ಪಣೆಗೊಳಿಸಿ ಜಿಮ್ಸ್ ನಲ್ಲಿನ ಆಸ್ಪತ್ರೆಯನ್ನು ಒಂದು ವಾರದೊಳಗೆ ನೂತನ ಕಟ್ಟಡಕ್ಕೆ ಸ್ಥಳಾಂತರಿಸಲಾಗುವುದು. ಕಟ್ಟಡದಲ್ಲಿ ಕಿಚನ್ ಸೇರಿದಂತೆ ಹೆಚ್ಚುವರಿ ಕಾಮಗಾರಿಗಳು ಸೇರ್ಪಡೆಯಾಗಿರುವುದರಿಂದ ೭೨ ಕೋಟಿ ರೂಪಾಯಿ ಹೆಚ್ಚುವರಿ ಅನುದಾನ ಕೋರಿದ್ದು, ಇದನ್ನು ಸಚಿವ ಸಂಪುಟ ಸಭೆ ಮುಂದಿಟ್ಟು ಮಂಜೂರಾತಿ ಪಡೆಯಲಾಗುವುದು. ಈಗಾಗಲೆ ವೈದ್ಯಕೀಯ ಸಲಕರಣೆಗೂ ಟೆಂಡರ್ ಕರೆಯಲಾಗಿದೆ ಎಂದರು.

<><*<><>*><>

ರಾಷ್ಟ್ರೀಯ ಅಂತರಿಕ್ಷಾ ದಿನಾಚರಣೆಯನ್ನು ಇದೇ ಆಗಸ್ಟ್ ೨೩ ರಂದು ದೇಶಾದ್ಯಾಂತ ಆಚರಿಸಲಾಗುತಿದ್ದು, ಅಂದಿನ ದಿನವನ್ನು ನಾವು ಬಾಹ್ಯಕಾಶ ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಧಿಸಬೇಕಾದ ಪ್ರಗತಿಯ ಚಿಂತನೆಯಲ್ಲಿ ವಿನಿಯೋಗಸಬೇಕು ಎಂದು ಇಸ್ರೋ ಯು.ಆರ್. ರಾವ್ ಉಪಗ್ರಹ ಕೇಂದ್ರದ ನಿರ್ದೇಶಕ ಎಂ. ಶಂಕರಂ ಹೇಳಿದ್ದಾರೆ. ಭಾರತೀಯ ವಿಜ್ಞಾನ ಸಂಸ್ಥೆ ಐಐಎಸ್‌ಸಿ ಯಲ್ಲಿ ಇಂದು ಏರ್ಪಡಿಸಿದ್ದ ಬಾಹ್ಯಕಾಶ ದಿನಾಚರಣೆಯ ಸ್ಮರಣಾರ್ಥ ಕಾರ್ಯಗಾರದಲ್ಲಿ ಅವರು ಮಾತನಾಡುತ್ತಿದ್ದರು. ಇಂದು ಇಸ್ರೋ ಸಂಸ್ಥೆ ಭಾರತೀಯನನ್ನು ಬಾಹ್ಯಕಾಶಕ್ಕೆ ರವಾನಿಸುವ ಮತ್ತು ೨೦೩೫ರ ವೇಳೆಗೆ ಭಾರತೀಯ ಅಂತರಿಕ್ಷಾ ಕೇಂದ್ರವನ್ನು ಸ್ಥಾಪಿಸಲು ಮತ್ತು ೨೦೪೦ರ ವೇಳೆಗೆ ಗಗನಯಾತ್ರಿಯನ್ನು ಚಂದ್ರ ಗ್ರಹಕ್ಕೆ ಕಳುಹಿಸಿ ನಂತರ ಭೂಮಿಗೆ ಮರಳುವಂತೆ ಯೋಜನೆ ಹಾಕಿಕೊಂಡಿದೆ ಎಂದರು. ಇಸ್ರೋ ಸಂಸ್ಥೆಯನ್ನು ವಿಕ್ರಂ ಸಾರಭಾಯಿ ೧೯೬೨ ರಲ್ಲಿ ಆರಂಭಿಸಿದಾಗ ಅದರ ಅಗತ್ಯವಿದೆಯೇ ಎಂಬ ಜಿಜ್ಞಾಸೆ ಮೂಡಿತ್ತು, ಆದರೆ ಇಂದು ಬಾಹ್ಯಕಾಶ ತಂತ್ರಜ್ಞಾನ ನಮ್ಮ ದೈನಂದಿನ ಜೀವನದ ಭಾಗವಾಗಿದೆ ಎಂದು ತಿಳಿಸಿದರು. ನೈಸರ್ಗಿಕ ವಿಕೋಪದ ನಿರ್ವಹಣೆ, ಹವಾಮಾನ ಮುನ್ಸೂಚನೆ, ದೂರಸಂವೇದಿ ಉಪಕ್ರಮಗಳು ಹಾಗೂ ಜಿಪಿಎಸ್ ವ್ಯವಸ್ಥೆಯನ್ನು ಇಸ್ರೋದ ಉಪಗ್ರಹಗಳು ಪೂರೈಸುತ್ತಿದೆ ಎಂದು ಶಂಕರಂ ತಿಳಿಸಿದರು.

<><*<><>*><>

ಜಲಜೀವನ್ ಮಿಷನ್ ಯೋಜನೆಯಡಿ ಮುಳಬಾಗಿಲು ತಾಲೂಕಿನ ಎಲ್ಲಾ ಗ್ರಾಮಗಳ ಮನೆ ಮನೆಗೂ ಕುಡಿಯುವ ನೀರಿನ ನಲ್ಲಿಗಳ ಸಂಪರ್ಕವನ್ನು ಹಂತ ಹಂತವಾಗಿ ಕಲ್ಪಿಸುತ್ತಿರುವುದಾಗಿ ಶಾಸಕ ಸಮೃದ್ಧಿ ಮಂಜುನಾಥ್ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಅಂಬ್ಲಿಕಲ್ ಗ್ರಾಮ ಪಂಚಾಯಿತಿಗೆ ಸೇರಿದ ಸಿದ್ದನಹಳ್ಳಿ, ಕಪ್ಪಲಮಡಗು ಗ್ರಾಮ ಪಂಚಾಯಿತಿಯ ಕಪ್ಪಲಮಡಗು, ಪದ್ಮಘಟ್ಟ ಗ್ರಾಮಗಳಲ್ಲಿ ಜಲಜೀವನ್ ಮಿಷನ್ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು. ಕೇಂದ್ರ ಸರ್ಕಾರದಿಂದ ಮುಳಬಾಗಿಲು ತಾಲೂಕಿಗೆ ಜಲಜೀವನ್ ಮಿಷನ್ ಯೋಜನೆಯಡಿ ೨೩೦ ಕೋಟಿ ರೂಪಾಯಿ ಬಿಡುಗಡೆಯಾಗಿದ್ದು, ಹಂತಹಂತವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸುವುದಾಗಿ ತಿಳಿಸಿದರು.

<><*<><>*><>

ಚಿತ್ರದುರ್ಗ ಜಿಲ್ಲೆಯ ಬರಪೀಡಿತ ತಾಲ್ಲೂಕುಗಳಲ್ಲಿ ೨೦೨೩-೨೪ನೇ ಸಾಲಿನಲ್ಲಿ ಕೈಗೊಂಡ ೩ ಕೋಟಿ ೩ ಲಕ್ಷ ರೂಪಾಯಿ ವೆಚ್ಚದ ತುರ್ತು ಕುಡಿಯುವ ನೀರಿನ ಕಾಮಗಾರಿಗಳ ಕ್ರಿಯಾ ಯೋಜನೆಗೆ ಘಟನೋತ್ತರ ಅನುಮತಿಯನ್ನು ನೀಡಲಾಯಿತು. ಈ ಕುರಿತು ನಗರದ ಜಿಲ್ಲಾ ಪಂಚಾಯತಿ ಕಚೇರಿಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಮಿತಿ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

<><*<><>*><>

ಮಡಿಕೇರಿಯಲ್ಲಿ ಗಾಂಧಿ ಸ್ಮಾರಕ ಉದ್ಯಾನವನವನ್ನು ೧ ಕೋಟಿ ರುಪಾಯಿ ವೆಚ್ಚದಲ್ಲಿ ಸುಸಜ್ಜಿತ ರೀತಿಯಲ್ಲಿ ನಿರ್ಮಿಸಲಾಗುತ್ತಿದೆ, ಎಂದು ಜಿಲ್ಲಾಧಿಕಾರಿ ವೆಂಕಟರಾಜಾ ತಿಳಿಸಿದ್ದಾರೆ. ಮಡಿಕೇರಿಯಲ್ಲಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಗಾಂಧಿ ಸ್ಮಾರಕ ಉದ್ಯಾನವನ ಪೂರ್ಣ ಕಾಮಗಾರಿ ಸೇರಿದಂತೆ  ಗ್ರಂಥಾಲಯ, ಉದ್ಯಾನವನ, ಬೆಳಕು ವ್ಯವಸ್ಥೆ, ಮತ್ತಿತರ ಕಾಮಗಾರಿಗೆ ಸುಮಾರು ೧ ಕೋಟಿ ೯೮ ಲಕ್ಷ ರೂಪಾಯಿ ಅಂದಾಜು ಮಾಡಲಾಗಿದೆ ಎಂದು ತಿಳಿಸಿದರು.

<><*<><>*><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರಿನ ನಯನ ಸಭಾಂಗಣದಲ್ಲಿ ಇದೇ ೧೭ ರಂದು 'ಮನೆಯಂಗಳದಲ್ಲಿ ಮಾತುಕತೆ' ವಿಶೇಷ ಕಾರ್ಯಕ್ರಮ ಆಯೋಜಿಸಿದೆ. ಕಾರ್ಯಕ್ರಮದಲ್ಲಿ ಖ್ಯಾತ ಗಮಕ ಕಲಾವಿದರಾದ ಗಂಗಮ್ಮ ಕೇಶವಮೂರ್ತಿ ತಿಂಗಳ ಅತಿಥಿಗಳಾಗಿ ಆಗಮಿಸಲಿದ್ದಾರೆ.

<><*<><>*><>

ರಾಜ್ಯದ ಒಳನಾಡಿನಲ್ಲಿ ನೈರುತ್ತ ಮುಂಗಾರು ಸಾಮಾನ್ಯವಾಗಿತ್ತು, ಹಾಗೂ ಕರಾವಳಿ ಭಾಗದಲ್ಲಿ ದುರ್ಬಲವಾಗಿತ್ತು. ದಕ್ಷಿಣ ಒಳನಾಡಿನ ಕೆಲವು ಕಡೆಗಳಲ್ಲಿ ಮಳೆಯಾಗಿದ್ದು, ಕರಾವಳಿ ಮತ್ತು ಉತ್ತರ ಒಳನಾಡಿನ ಪ್ರತ್ಯೇಕ ಸ್ಥಳಗಳಲ್ಲಿ ಮಳೆಯಾಗಿದೆ. ಮುನ್ಸೂಚನೆಯಂತೆ ಮುಂದಿನ ನಾಲ್ಕು ದಿನಗಳಲ್ಲಿ ಕರಾವಳಿ ಭಾಗದ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ. ರಾಮನಗರ, ತುಮಕೂರು, ಚಿತ್ರದುರ್ಗ, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ. ಉಳಿದಂತೆ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಹಾಸನ, ಮಂಡ್ಯ, ಮೈಸೂರು ಜಿಲ್ಲೆಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆ ಸಾಧ್ಯತೆ. ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮೋಡಕವಿದ ವಾತವರಣವಿರಲಿದ್ದು, ಗುಡುಗು ಸಹಿತ ಸಾಧಾರಣದಿಂದ ಭಾರೀ

ಮಳೆಯಾಗುವ ಸಾಧ್ಯತೆಇದೆ. ಗರಿಷ್ಟ ೩೦ ಕನಿಷ್ಟ ೨೧ ಡಿಗ್ರಿ ಸೆಲ್ಸಿಯಸ್ ತಾಪಾಮಾನ ದಾಖಲಾಗುವ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><**